ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ರಾಜ್ಯಸಭೆ ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 19/11/20

# ರಾಜ್ಯಸಭೆ: ನಾರಾಯಣ್ ಅವಿರೋಧ ಆಯ್ಕೆ ಖಚಿತ



ಬೆಂಗಳೂರು: ರಾಜ್ಯಸಭೆಯ ಒಂದು ಸ್ಥಾನಕ್ಕೆ ನಡೆಯುವ ಉಪಚುನಾವಣೆಗೆ ಬಿಜೆಪಿ ಅಭ್ಯರ್ಥಿಯಾಗಿ ಕೆ. ನಾರಾಯಣ್ ಅವರು ಬುಧವಾರ ನಾಮಪತ್ರ ಸಲ್ಲಿಸಿದರು.

ಅಶೋಕ್ ಗಸ್ತಿ ಅವರ ನಿಧನದಿಂದ ತೆರವಾಗಿದ್ದ ಸ್ಥಾನಕ್ಕೆ ಉಪಚುನಾವಣೆ ನಡೆಯಲಿದೆ. ಚುನಾವಣಾಧಿಕಾರಿ ಎಂ.ಕೆ.ವಿಶಾಲಾಕ್ಷಿ ಅವರಿಗೆ ನಾರಾಯಣ್ ನಾಮಪತ್ರ ಸಲ್ಲಿಸಿದರು.

ನಾಮಪತ್ರ ಸಲ್ಲಿಕೆಗೆ ಬುಧವಾರ ಕೊನೆಯ ದಿನವಾಗಿದ್ದು, ಬೇರೆ ಯಾರೂ ನಾಮಪತ್ರ ಸಲ್ಲಿಸದೇ ಇರುವುದರಿಂದ ನಾರಾಯಣ್, ಅವಿರೋಧವಾಗಿ ಆಯ್ಕೆಯಾಗುವುದು ಬಹುತೇಕ ಖಚಿತವಾಗಿದೆ.

ನಾಮಪತ್ರ ಸಲ್ಲಿಕೆಯ ಸಂದರ್ಭದಲ್ಲಿ ರಾಜ್ಯ ಬಿಜೆಪಿ ಅಧ್ಯಕ್ಷ ನಳಿನ್ ಕುಮಾರ್ ಕಟೀಲ್, ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್.ಈಶ್ವರಪ್ಪ, ತೋಟಗಾರಿಕೆ ಸಚಿವ ನಾರಾಯಣಗೌಡ, ಶಾಸಕ ಸುನಿಲ್ ಕುಮಾರ್ ಹಾಜರಿದ್ದರು.